ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಕಾರವಾರ ಜಿಲ್ಲೆಯಲ್ಲಿ ಜಿಲ್ಲಾಡಳಿತ ಕಛೇರಿ ಹಾಗೂ ತಾಲ್ಲೂಕು ಕಛೇರಿಯಲ್ಲಿ ಭ್ರಷ್ಟಾಚಾರದ ಬಗ್ಗೆ

ಶ್ರೀ ಘೊಟ್ನೇಕರ ಶ್ರೀಕಾಂತ ಲಕ್ಷ್ಮಣ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

1130 (1162) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕಾರವಾರ ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ಕೆಲವೊಂದು ಸಿಬ್ಬಂದಿ ಜನರಿಂದ ಲಕ್ಷಾಂಕರ ರೂಪಾಯಿ ಹಣ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)

(ಆ) ಜೋಯಿಡಾ ತಹಶೀಲ್ದಾರ ಕಛೇರಿಯಲ್ಲಿ ಇದೇ ತರಹದ ವರ್ತನೆ ಮಾಡುತ್ತಿರುವ ಸಿಬ್ಬಂದಿ ಮೇಲೆ ಜನರೇ ಎ. ಸಿ. ಬಿ ಗೆ ದೂರು ನೀಡಿ ದಾಖಲೆ ಸಮೇತ ಹಿಡಿದುಕೊಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)

(ಇ) ಈ ರೀತಿ ಪದೇ ಪದೇ ಕಂದಾಯ ಇಲಾಖೆಯಲ್ಲಿ ಆಗುತ್ತಿರುವ ಘಟನೆಗೆ ಯಾರು ಹೊಣೆಗಾರರು; ಕೆಲವೊಂದು ಸಿಬ್ಬಂದಿ ಈ ರೀತಿ ಅವ್ಯವಹಾರ ಮಾಡುತ್ತಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದ್ದು, ಅನಾವಶ್ಯಕವಾಗಿ ಅಧಿಕಾರಿಗಳ ಹೆಸರು ಹೇಳಿ ಹಣ ವಸೂಲಿ ಮಾಡುವುದು ಅಧಿಕಾರಿಗಳ ಗಮನಕ್ಕೆ ಬಂದಿರುತ್ತದೆಯೇ; (ವಿವರ ನೀಡುವುದು)

(ಈ) ಇಲಾಖೆಯಲ್ಲಿ ಈ ರೀತಿ ಅವ್ಯವಹಾರ ಮಾಡುತ್ತಿರುವವರು ಯಾರು; ಇವರ ವಿರುದ್ಧ ಸೂಕ್ತ ತನಿಖೆ ಮಾಡಲಾಗುವುದೇ; ಈ ಬಗ್ಗೆ ಸೂಕ್ತ ಕ್ರಮ ಕೈಗೊಂಡು ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲಾಗುವುದೇ? (ವಿವರ ನೀಡುವುದು)